ಬೆಳ್ತಂಗಡಿ ತಾಲ್ಲೂಕಿನಲ್ಲಿ ಪ್ರಕೃತಿ ವಿಕೋಪದಿಂದ ರಸ್ತೆಗಳಿಗೆ ಉಂಟಾದ ಹಾನಿ

3153 - ಶ್ರೀ ಪ್ರಭಾಕರ ಬಂಗೇರ ಕೆ. (ಬೆಳ್ತಂಗಡಿ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ರಾಜ್ಯದಲ್ಲಿಯೇ ಅತೀ ಹೆಚ್ಚು ಮಳೆ ಬೀಳುವ ಬೆಳ್ತಂಗಡಿ ತಾಲ್ಲೂಕಿನಲ್ಲಿ ಮಳೆಯಿಂದ ಸಂಪರ್ಕ ರಸ್ತೆಗಳಿಗೆ ಉಂಟಾಗುತ್ತಿರುವ ಹಾನಿಯು ಸರ್ಕಾರದ ಗಮನಕ್ಕೆ ಬಂದಿದೆಯೇ? ಹಾಗಿದ್ದಲ್ಲಿ, ಹಾನಿಗೊಂಡ ರಸ್ತೆಗಳ ದುರಸ್ತಿ ಕಾರ್ಯಕ್ಕಾಗಿ ಬಿಡುಗಡೆ ಮಾಡುತ್ತಿರುವ ಮೊತ್ತವೆಷ್ಟು?*

ಆ) *ಬಿಡುಗಡೆ ಮಾಡುತ್ತಿರುವ ಹಣ ಪಕ್ಷಾತೀತವಾಗಿ ವಿನಿಯೋಗವಾಗಲು ಸರ್ಕಾರ ಮುಂದಾಗುವುದೇ?*

ಇ) *ಬೆಳ್ತಂಗಡಿ ತಾಲ್ಲೂಕಿಗೆ ನೀಡುವ ಅನುದಾನದ ಮೊತ್ತವನ್ನು ಹೆಚ್ಚಿಸಲು ಸರ್ಕಾರ ಕ್ರಮ ಜರುಗಿಸುವುದೇ?*

ಶ್ರೀ ಧರ್ಮ್ ಸಿಂಗ್ (ಲೋಕೋಪಯೋಗಿ ಸಚಿವರು) ;

ಅ) ಸರ್ಕಾರದ ಗಮನಕ್ಕೆ ಬಂದಿದೆ. ಬೆಳ್ತಂಗಡಿ ತಾಲ್ಲೂಕು ರಸ್ತೆಗಳ ವಾರ್ಷಿಕ ದುರಸ್ತಿ ಮತ್ತು ಸುಧಾರಣೆಗಾಗಿ 2000-2001ನೇ ಸಾಲಿಗೆ 48.935 ಲಕ್ಷ ರೂ.ಗಳ ಅನುದಾನ ಒದಗಿಸಿದೆ. ಅಲ್ಲದೇ ವಿವಿಧ ಲೆಕ್ಕಶೀರ್ಷಿಕೆಯಡಿಯಲ್ಲಿ ಅನುದಾನ ಈ ಕೆಳಕಂಡಂತಿದೆ.

		ಲಕ್ಷ ರೂ.ಗಳು
1.	ಸಿಆರ್ಎಫ್ ಅನುದಾನ	160.00
2.	5054 (ಯೋಜನೆ) 75 ಕೋಟಿ ಕಾರ್ಯಕ್ರಮ	51.00
3.	ಪ್ರಕೃತಿ ವಿಕೋಪದಡಿ ಪ್ರಸ್ತುತ ವರ್ಷದಲ್ಲಿ	1.60
	ಒಟ್ಟಾರೆ ರೂ.	**212.60**

ಆ) ಲಭ್ಯವಿರುವ ಅನುದಾನದ ಅಡಿಯಲ್ಲಿ ಬಿಡುಗಡೆ ಮಾಡುತ್ತಿರುವ ಹಣವನ್ನು ಪಕ್ಷಾತೀತವಾಗಿ ವಿನಿಯೋಗಿಸಲಾಗಿದೆ.

ಇ) ಪರಿಶೀಲಿಸಲಾಗುವುದು.

ಬೆಳ್ತಂಗಡಿ ತಾಲ್ಲೂಕಿನ ಕ್ರೀಡಾಂಗಣದ ಕಾಮಗಾರಿ

3154 - ಶ್ರೀ ಕೆ. ಪ್ರಭಾಕರ ಬಂಗೇರ (ಬೆಳ್ತಂಗಡಿ) : ಮಾನ್ಯ ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) *ಬೆಳ್ತಂಗಡಿ ತಾಲ್ಲೂಕಿನ ಕ್ರೀಡಾಂಗಣದ ಕಾಮಗಾರಿಯು ಯಾವ ಹಂತದಲ್ಲಿದೆ?*

ಆ) ಈ ಯೋಜನೆಗಾಗಿ ಮಂಜೂರಾಗಿರುವ ಮೊತ್ತವೆಷ್ಟು? ಹಾಗೂ ಬಾಕಿ ಇರುವ ಕಾಮಗಾರಿಯನ್ನು ಯಾವಾಗ ಮುಕ್ತಾಯಗೊಳಿಸಲಾಗುವುದು?

ಶ್ರೀ ಎಸ್.ಎಸ್. ಮಲ್ಲಿಕಾರ್ಜುನ್ (ಯುವಜನ ಸೇವಾ ಮತ್ತು ಕ್ರೀಡಾ ರಾಜ್ಯ ಸಚಿವರು) :

ಅ) ಬೆಳ್ತಂಗಡಿ ತಾಲ್ಲೂಕು ಕ್ರೀಡಾಂಗಣದ ಆವರಣವನ್ನು ಸಮತಟ್ಟು ಮಾಡುವ ಕಾಮಗಾರಿ ಪ್ರಗತಿಯಲ್ಲಿದೆ.

ಆ) ರೂ. 22.37 ಲಕ್ಷಗಳು ಸದರಿ ಕ್ರೀಡಾಂಗಣದ ನಿರ್ಮಾಣ ಅಂದಾಜು ವೆಚ್ಚ ರೂ. 54.00 ಲಕ್ಷಗಳಾಗಿದ್ದು ಬಾಕಿ ಹಣ ಮಂಜೂರಾದ ಮೇಲೆ ಇನ್ನು 2 ವರ್ಷಗಳಲ್ಲಿ ಪೂರ್ಣಗೊಳಿಸ ಬಹುದಾಗಿದೆ.

ಬೆಳ್ತಂಗಡಿ ತಾಲ್ಲೂಕಿನಲ್ಲಿರುವ ಮಾಲಾಡಿ ಕೈಗಾರಿಕಾ ತರಬೇತಿ ಕೇಂದ್ರದ ಕಟ್ಟಡ

3156 - ಶ್ರೀ ಪ್ರಭಾಕರ ಕೆ. ಬಂಗೇರ (ಬೆಳ್ತಂಗಡಿ) : ಮಾನ್ಯ ಕಾರ್ಮಿಕ ಮತ್ತು ವಕ್ಫ್ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಬೆಳ್ತಂಗಡಿ ತಾಲ್ಲೂಕಿನ ಮಾಲಾಡಿ ಕೈಗಾರಿಕಾ ತರಬೇತಿ ಕೇಂದ್ರಕ್ಕೆ (ಐಟಿಐ) ಸ್ವಂತ ಕಟ್ಟಡವಿಲ್ಲದಿರುವುದು ಸರಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ಕಾಮಗಾರಿಯನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಎ.ಎಂ. ಹಿಂಡಸಗೇರಿ (ಕಾರ್ಮಿಕ ಮತ್ತು ವಕ್ಫ್ ಸಚಿವರು) :

ಅ) ಬಂದಿದೆ.

ಆ) ಕಟ್ಟಡ ನಿರ್ಮಾಣಕ್ಕಾಗಿ ಸರ್ಕಾರದ ಜಮೀನು ಸ್ವಾಧೀನ ಕೆಲಸ ನಡೆಸಲಾಗುತ್ತಿದೆ. ಸ್ವಾಧೀನವಾದ ನಂತರ ಕಟ್ಟಡ ನಿರ್ಮಾಣ ಕಾರ್ಯವನ್ನು ಕೈಗೆತ್ತಿಕೊಳ್ಳಲು ಕ್ರಮ ತೆಗೆದು ಕೊಳ್ಳಲಾಗುವುದು.

ಭಾಲ್ಕಿ ವಿಧಾನ ಸಭಾ ಕ್ಷೇತ್ರದಲ್ಲಿ ರಸ್ತೆಗಳ ನಿರ್ವಹಣೆ

3157 - ಶ್ರೀ ಪ್ರಕಾಶ್ ಖಂಡ್ರೆ (ಭಾಲ್ಕಿ) : ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಭಾಲ್ಕಿ ವಿಧಾನಸಭಾ ಕ್ಷೇತ್ರವಲ್ಲಿ ಎಷ್ಟು ಕಿ.ಮೀ. ರಸ್ತೆಗಳನ್ನು ಲೋಕೋಪಯೋಗಿ ಇಲಾಖೆಯು ನಿರ್ವಹಿಸುತ್ತದೆ. ಕಳೆದ 3 ವರ್ಷಗಳಲ್ಲಿ ಈ ರಸ್ತೆಗಳಲ್ಲಿ ಈ ರಸ್ತೆಗಳ ನಿರ್ವಹಣೆಗಾಗಿ ಪ್ರತಿ ವರ್ಷ ಖರ್ಚು ಮಾಡಲಾದ ಹಣವೆಷ್ಟು?